(ಇಂದು ದಿನಾಂಕಃ 05-11-2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು)

**ಪಾಟೀ ಸವಾಲು 3 ನೇ ಎದುರುದಾರರ ಪರ ಶ್ರೀ VRM ವಕೀಲರಿಂದಃ**

ಮೃತ ದೇವಿಂದ್ರಪ್ಪ ನನ್ನ ಮಗ. ನನ್ನ ಮಗ ಮೋಟಾರ ಸೈಕಲ ಮೇಲೆ ತಾಂಡೂರಿಗೆ ಹೋಗಿದ್ದರು. ವಾಪಾಸು ಬರುತ್ತಿರುವಾಗ ಅಪಘಾತ ಆಗಿದೆ. ಅಪಘಾತ ಆದಾಗ ನನ್ನ ಮಗ ದೇವಿಂದ್ರಪ್ಪ ಮೋಟಾರ ಸೈಕಲ್ ಚಾಲನೆ ಮಾಡುತ್ತಿದ್ದ. ಆತನ ಡಿ.ಎಲ್ ಹಾಜರುಪಡಿಸಿದ್ದೇನೆ. ನನ್ನ ಮಗನಿಗೆ ಡಿ.ಎಲ್ ಇರಲಿಲ್ಲ ಎಂದರೆ ಸರಿಯಲ್ಲ. ಲಾರಿ ಬಂದು ಮೋಟಾರು ಸೈಕಲಿಗೆ ಡಿಕ್ಕಿ ಪಡಿಸಿ ಅಪಘಾತ ಆಗಿದೆ. ಲಾರಿ ಎದುರುಗಡೆಯಿಂದ ಬಂದು ಡಿಕ್ಕಿ ಹೊಡಿದಿದೆ. ಅಪಘಾತ ಮಧ್ಯ ರಸ್ತೆಯಲ್ಲಿ ಆಗಿದೆ ಎಂದರೆ ನನಗೆ ಗೊತ್ತಿಲ್ಲ. ನಿ.ಪಿ-4 ನಕಾಶೆ ಪ್ರಕಾರ ರಸ್ತೆ ಮಧ್ಯದಲ್ಲಿ ಅಪಘಾತ ಆಗಿದೆ ಎಂದರೆ ನನಗೆ ಗೊತ್ತಿಲ್ಲ. ನನ್ನ ಮಗ ಮೋಟಾರ ಸೈಕಲನ್ನು ಅತಿ ವೇಗ ಮತ್ತು ನಿಷ್ಕಾಳಜಿತನದಿಂದ ಚಾಲನೆ ಮಾಡಿಕೊಂಡು ಹೋಗಿ ಲಾರಿಗೆ ಡಿಕ್ಕಿಪಡಿಸಿದ್ದಾರೆ ಎಂದರೆ ಸರಿಯಲ್ಲ. ಅಪಘಾತದಲ್ಲಿ ಲಾರಿ ಚಾಲಕ ಮತ್ತು ನನ್ನ ಮಗ ಇಬ್ಬರು ತಪ್ಪು ಮಾಡಿದ್ದಾರೆ ಎಂದರೆ ಸರಿಯಲ್ಲ. ಅಪಘಾತ ನನ್ನ ಮಗನ ತಪ್ಪಿನಿಂದ ಆಗಿದ್ದರೂ ಪರಿಹಾರ ಪಡೆಯುವ ಸಲುವಾಗಿ ಒಂದು ದಿನ ತಡವಾಗಿ ಲಾರಿ ಚಾಲಕನ ವಿರುದ್ದ ಸುಳ್ಳು ದೂರು ನೀಡಿದ್ದೇನೆ ಎಂದರೆ ಸರಿಯಲ್ಲ.

ಅಪಘಾತ ಆದ ನಂತರ ನನ್ನ ಮಗನನ್ನು ತಾಂಡೂರು ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಹೋಗಿದ್ದರು ನಂತರ ಹೈದರಾಬಾದಿನ ಮುರುಗನ್ ಆಸ್ಪತ್ರೆಗೆ ಕರೆದುಕೊಂಡು ಹೋಗಿದ್ದರು. ಮೇಲಿನ ಎರಡು ಆಸ್ಪತ್ರೆಗಳಲ್ಲಿ ನನ್ನ ಮಗನಿಗೆ ಚಿಕಿತ್ಸೆ ಕೊಡಿಸಿದ್ದೇವೆ ಎಂದು ತೋರಿಸಲು ಯಾವುದೇ ದಾಖಲಾತಿ ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ನನ್ನ ಮಗ ತೀರಿ ಹೋದಾಗ ಆತನಿಗೆ 25 ವರ್ಷ ವಯಸ್ಸಾಗಿತ್ತು. ನನ್ನ ಮಗನ ಆಧಾರಕಾರ್ಡ ಹಾಜರುಪಡಿಸಿಲ್ಲ. ಹಾಜರು ಪಡಿಸಲು ತೊಂದರೆ ಇಲ್ಲ. ಅಪಘಾತ ಆದಾಗ ನನ್ನ ಮಗನ ವಯಸ್ಸು 30 ಕ್ಕಿಂತ ಹೆಚ್ಚು ಇತ್ತು ಎಂದರೆ ಸರಿಯಲ್ಲ. ನನ್ನ ಮಗ ವ್ಯವಸಾಯ ಮತ್ತು ಕುರಿ ಸಾಕಾಣಿಕೆ ಮಾಡಿ ತಿಂಗಳಿಗೆ 30 ಸಾವಿರ ಸಂಪಾದನೆ ಮಾಡುತ್ತಿದ್ದ ಎಂದು ಸುಳ್ಳು

ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನಗೆ ದೇವೇಂದ್ರ ಒಬ್ಬನೆ ಮಗ. ಒಬ್ಬಳು ಮಗಳು ಇದ್ದಾಳೆ, ನನ್ನ ಗಂಡ ತೀರಿ ಹೋಗಿದ್ದಾರೆ. ನನ್ನ ಮಗನ ತಪ್ಪಿನಿಂದ ಅಪಘಾತ ಆಗಿದ್ದರೂ ಪರಿಹಾರ ಪಡೆಯುವ ಸಲುವಾಗಿ ಲಾರಿ ಚಾಲಕನ ವಿರುದ್ದ ಸುಳ್ಳು ದೂರು ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ. ನಾನು ಸುಳ್ಳು ಪ್ರಮಾಣಪತ್ರ ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ. ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು,
ಮತ್ತು ಜೆ.ಎಮ್. ಎಫ್. ಸಿ,
ಚಿಂಚೋಳಿ.